ಕರ್ನಾಟಕ ಸರ್ಕಾರ

ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, ಸಂಪಿಗೆ ರಸ್ತೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-12.

ಸಂಖ್ಯೆ: ಪಪೂಶಿಇ/ಶೈಶಾ/ಕಾಪ್ರಾಬು/2020-21 ದಿನಾಂಕ: 06-08-2021.

-:ಸುತ್ತೋಲೆ:-

ವಿಷಯ: 2021-22ನೇ ಶೈಕ್ಷಣಿಕ ಸಾಲಿನಲ್ಲಿ ಪದವಿ ಪೂರ್ವ ಕಾಲೇಜುಗಳನ್ನು ಪ್ರಾರಂಭಿಸಲು ಪೂರ್ವ ತಯಾರಿ ಕುರಿತು.

ಉಲ್ಲೇಖ: ದಿನಾಂಕ 06-08-2021 ರಂದು ಸನ್ಮಾನ್ಯ ಮುಖ್ಯ ಮಂತ್ರಿಗಳ ನೇತೃತ್ವದಲ್ಲಿ ನಡೆದ ಸಭೆ.

****

ಇಂದು ಸನ್ಮಾನ್ಯ ಮುಖ್ಯ ಮಂತ್ರಿಯವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಚರ್ಚಿಸಿದಂತೆ ಅತೀ ಶೀಘ್ರದಲ್ಲಿ ರಾಜ್ಯದಲ್ಲಿ ಶಾಲಾ-ಕಾಲೇಜುಗಳನ್ನು ಪ್ರಾರಂಭಿಸಬೇಕೆಂದು ಮಾನ್ಯ ಮುಖ್ಯ ಮಂತ್ರಿಯವರ ಕೋವಿಡ್ ವಿಶೇಷ ಕಾರ್ಯ ಪಡೆಯು (Covid Special task Force) ಸೂಚಿಸಿರುತ್ತದೆ. ಈ ಹಿನ್ನೆಲೆಯಲ್ಲಿ ಪದವಿ ಪೂರ್ವ ಶಿಕ್ಷಣ ಇಲಾಖೆಯು ಪದವಿ ಪೂರ್ವ ತರಗತಿಗಳನ್ನು ಭೌತಿಕವಾಗಿ ಪ್ರಾರಂಭಿಸಲು ಅದಕ್ಕೆ ಪೂರ್ವ ತಯಾರಿಯಾಗಿ ಎಲ್ಲಾ ಕಾಲೇಜುಗಳ ಪ್ರಾಂಶುಪಾಲರು, ಉಪನ್ಯಾಸಕರು ಹಾಗೂ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳೆಲ್ಲರೂ ಕಡ್ಡಾಯವಾಗಿ ವ್ಯಾಕ್ಸಿನೇಶನ್ ಪಡೆದುಕೊಳ್ಳಲು ತಿಳಿಸಿದೆ.

ಈ ಮಾಹಿತಿಯು ರಾಜ್ಯದ ಎಲ್ಲಾ ಸರ್ಕಾರಿ/ಖಾಸಗಿ ಅನುದಾನಿತ/ ಅನುದಾನರಹಿತ/ ಮಹಾನಗರ ಪಾಲಿಕೆಯ ಪದವಿ ಪೂರ್ವ ಕಾಲೇಜುಗಳಿಗೆ ಅನ್ವಯಿಸುತ್ತದೆ. ಮುಂದುವರೆದು ಎಲ್ಲಾ ಅಧಿಕಾರಿ ಮತ್ತು ಸಿಬ್ಬಂದಿಗಳು ವ್ಯಾಕ್ಸಿನೇಶನ್ ಪಡೆದುಕೊಂಡ ಬಗ್ಗೆ ಮಾಹಿತಿಯನ್ನು ಎಲ್ಲಾ ಪ್ರಾಂಶುಪಾಲರು ತಮ್ಮ ಕಾಲೇಜಿನ SATS ಲಾಗಿನ್‌ನಲ್ಲಿ ಇಂದೀಕರಿಸಲು (Update) ತಿಳಿಸಿದೆ.

Snehal

ನಿರ್ದೇಶಕರು

ಪದವಿ ಪೂರ್ವ ಶಿಕ್ಷಣ ಇಲಾಖೆ

ಇವರಿಗೆ,

1. ರಾಜ್ಯದ ಎಲ್ಲಾ ಜಿಲ್ಲಾ ಉಪ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ.
2. ರಾಜ್ಯದ ಎಲ್ಲಾ ಕಾಲೇಜುಗಳ ಪ್ರಾಂಶುಪಾಲರುಗಳು-ಸೂಕ್ತ ಕ್ರಮಕ್ಕಾಗಿ.
3. ಸಹಾಯಕ ನಿರ್ದೇಶಕರು, ಇ-ಆಡಳಿತ, ಪದವಿ ಪೂರ್ವ ಶಿಕ್ಷಣ ಇಲಾಖೆ-ಇಲಾಖಾ ಅಂತರ್ಜಾಲದಲ್ಲಿ ಅಳವಡಿಸಲು.

ಮಾಹಿತಿಗಾಗಿ:-

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, 6ನೇ ಮಹಡಿ, ಬೆಂಗಳೂರು-560001.
2. ಕಚೇರಿ ಪ್ರತಿ.